ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | 110(861) |
| ಸದಸ್ಯರ ಹೆಸರು: | ಶ್ರೀ ಕೆ.ಎ. ತಿಪ್ಪೇಸ್ವಾಮಿ(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ: | 23.02.2023 |
| ಉತ್ತರಿಸುವವರು: | ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲ್ಲಾಖೆಯಲ್ಲಿ ಪ್ರಧಾನ ಮಂತ್ರಿ ಗ್ರಾಮೀಣ ಡಿಜಿಟಲ್ ಸಾಕ್ಷರತೆ ಅಭಿಯಾನದ ಅಡಿಯಲ್ಲಿ ಉಪಯೋಗಿಸುತ್ತಿರುವ ತಂತ್ರಜ್ಞಾನಗಳು ಯಾವುವು; (ಇವುಗಳ ಬಗ್ಗೆ ಪೂರ್ಣ ಮಾಹಿತಿ ನೀಡುವುದು) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಪ್ರಧಾನ ಮಂತ್ರಿ ಗ್ರಾಮೀಣ ಡಿಜಿಟಲ್ ಸಾಕ್ಷರತೆ ಅಭಿಯಾನ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿಲ್ಲ. |
| ಆ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಡಿಜಿಟಲ್ ತಂತ್ರಜ್ಞಾನ ಬಳಕೆ ಅಭಿಯಾನ ಅಡಿಯಲ್ಲಿ ಕಂಪ್ಯೂಟರ್/ಡಿಜಿಟಲ್ ಉಪಕರಣಗಳಾದ ಟ್ಯಾಬ್ಲೆಟ್, ಸ್ಮಾರ್ಟ್‌ಫೋನ್ ಇತ್ಯಾದಿ ಬಳಸಲು ಸೂಕ್ತ ತರಬೇತಿಯನ್ನು ಸಾರ್ವಜನಿಕರಿಗೆ, ಪಂಚಾಯತ್ ಸದಸ್ಯರಿಗೆ ಮತ್ತು ಸಿಬ್ಬಂದಿಗಳಿಗೆ ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ, (ಡಿಜಿಟಲ್ ತರಬೇತಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೂಪಿಸಿರುವ ಕಾರ್ಯಕ್ರಮಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | ಹೌದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಟ್ಯಾಬ್ಲೆಟ್, ಸ್ಮಾರ್ಟ್‌ಫೋನ್ ಮತ್ತು ಮೊಬೈಲ್ ಆಪ್ಸ್ ಬಳಕೆಯ ಬಗ್ಗೆ ಹಲವಾರು ತರಬೇತಿಯನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾನಿಲಯ, ಗದಗ ಹಾಗೂ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಮೂಲಕ ಗ್ರಾಮ ಪಂಚಾಯತಿಯ ಸಿಬ್ಬಂದಿಗಳಿಗೆ ನೀಡಲಾಗುತ್ತಿದೆ. |
| ಇ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ರಾಷ್ಟ್ರೀಯ ಮೊಬೈಲ್ ಉಸ್ತುವಾರಿ ಸಾಫ್ಟ್ ವೇರ್ ಅನ್ನು ಬಳಕೆ ಮಾಡಲಾಗುತ್ತಿದೆಯೇ; ಹಾಗಿದ್ದಲ್ಲಿ, ಈ ಸ್ಮಾರ್ಟ್‌ಫೋನ್ ಬಳಕೆಗೆ ಅಗತ್ಯವಿರುವ ಡಿಜಿಟಲ್ ತರಬೇತಿ, ಸ್ಮಾರ್ಟ್‌ಫೋನ್ ವ್ಯವಸ್ಥೆ ಮತ್ತು ಇಂಟರ್‌ನೆಟ್ ಸೌಲಭ್ಯಗಳನ್ನು ಅನುಷ್ಠಾಗೊಳಿಸುತ್ತಿರುವ ಕುರಿತು ಸಂಬಂಧಿಸಿದವರಿಗೆ ನಿರ್ದೇಶನ ನೀಡಲಾಗಿದೆಯೇ?<br>(ಪೂರ್ಣ ಮಾಹಿತಿ ನೀಡುವುದು) | ಹೌದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನಾಗರೀಕರಿಗೆ ಆನ್‌ಲೈನ್ ಮೂಲಕ ಸೇವೆಗಳನ್ನು ಒದಗಿಸುವಂತೆ ಅನುವು ಮಾಡಿಕೊಡಲು ಬಾಪೂಜಿ ಸೇವಾ ಕೇಂದ್ರ ಮೊಬೈಲ್ ಆಪ್ ಅನ್ನು ಬಳಸಲಾಗುತ್ತಿದೆ ಹಾಗೂ ಪಂಚತಂತ್ರ 2.0 ತಂತ್ರಾಂಶದ ಮೊಬೈಲ್ ಆಪ್ ಅನ್ನು ಗ್ರಾಮ ಪಂಚಾಯತಿಯ ಸಿಬ್ಬಂದಿಗಳಿಗೆ ಒದಗಿಸಲಾಗಿದ್ದು, ಸದರಿ ಮೊಬೈಲ್ ಆಪ್ ಮೂಲಕ ತೆರಿಗೆ ವಸೂಲಾತಿ ದೂರ ದೃಷ್ಠಿ ಯೋಜನೆಯಡಿ ಗುಂಪು ಚರ್ಚೆ, ಸ್ವಚ್ಛ ಭಾರತ್ ಮಿಷನ್ ಯೋಜನೆಯ ಫಲಾನುಭವಿಗಳ IHHL ಗಳ Geo TAG ಮಾಡಲಾಗುತ್ತಿದೆ. |
| ಈ) | ಸದರಿ ಇಲಾಖೆಯಲ್ಲಿ ಅಗತ್ಯ ಡಿಜಿಟಲ್ ತರಬೇತಿ, ಗ್ರಾಮೀಣ ಪ್ರದೇಶದಲ್ಲಿ ಇಂಟರ್ ನೆಟ್ ವ್ಯವಸ್ಥೆ ಇಲ್ಲದೆ ಇರುವುದು ಉತ್ತಮ ಮತ್ತು ಶಕ್ತಿಯುತ ಸ್ಮಾರ್ಟ್‌ಫೋನ್ ನೀಡದೇ ಹಾಗೂ ಸಿಬ್ಬಂದಿಗೆ ತಂತ್ರಜ್ಞಾನ ಅರಿವು ಇಲ್ಲದೆ ಇರುವುದರಿಂದ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅನುಷ್ಠಾನ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ಈ ವ್ಯವಸ್ಥೆಯನ್ನು ಸುಧಾರಿಸಲು ಕೈಗೊಂಡಿರುವ ಕ್ರಮಗಳು ಯಾವುವು?<br>(ಪೂರ್ಣ ಮಾಹಿತಿ ನೀಡುವುದು) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಆಯುಕ್ತಾಲಯದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಅಗತ್ಯ ತರಬೇತಿ, ಇಂಟರ್‌ನೆಟ್ ವ್ಯವಸ್ಥೆ ಕಲ್ಪಿಸಲಾಗಿದೆ ಹಾಗೂ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಿಂದ 2021-2ನೇ ಸಾಲಿನಲ್ಲಿ 893 ಅತ್ಯಾಧುನಿಕ ಕಂಪ್ಯೂಟರ್ ಗಳನ್ನು ಸರಬರಾಜು ಮಾಡಲಾಗಿದೆ ಹಾಗೂ 5632 ಗ್ರಾಮ ಪಂಚಾಯತಿಗಳಿಗೆ ಉತ್ತಮ ಗುಣಮಟ್ಟದ ಲ್ಯಾಪ್‌ಟಾಪ್ ಗಳನ್ನು ಒದಗಿಸಲಾಗಿದೆ ಮತ್ತು ಎಲ್ಲಾ ಪಿಡಿಓ ಗಳಿಗೆ ಸಿಯುಜಿ ಸಿಮ್ ವಿತರಿಸಲಾಗಿದೆ. ಹಾಗಾಗಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ತಂತ್ರಜ್ಞಾನ ಅರಿವು ಇಲ್ಲದಿರುವ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |

ಸಂ: ಗ್ರಾಅಪ/44/2023, ದಿನಾಂಕ:21.02.2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ